ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803

ಅಂತರ್ಜಾಲ: https://kptcl.karnataka.gov.in
ಮಿಂಚಂಚೆ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)

ಸಂಖ್ಯೆ: ಕವಿಪ್ರನಿನಿ/ಬಿ16/86393/2018-19 ದಿನಾಂಕ: 12 FEB 2021

## ಸಾರ್ವಜನಿಕ ಎಚ್ಚರಿಕೆ ಪ್ರಕಟಣೆ

(ಉದ್ಯೋಗಾಕಾಂಕ್ಷಿಗಳ ವಿಶೇಷ ಗಮನಕ್ಕೆ)

ಕೆಲವು ವ್ಯಕ್ತಿಗಳು, ಉದ್ಯೋಗಾಕಾಂಕ್ಷಿಗಳಿಗೆ ಕವಿಪ್ರನಿನಿ ಮತ್ತು ಇತರ ವಿದ್ಯುತ್ ಸರಬರಾಜು ಕಂಪನಿಗಳ ಹೆಸರಿನಲ್ಲಿ ನಕಲಿ ನೇಮಕಾತಿ ಆದೇಶ ಮತ್ತು ದೃಢೀಕರಣ ಪತ್ರಗಳನ್ನು ನೀಡಿ ವಂಚಿಸುತ್ತಿರುವುದು ನಿಗಮದ ಗಮನಕ್ಕೆ ಬಂದಿದ್ದು, ಈ ಬಗ್ಗೆ ತನಿಖೆ ಮಾಡಲು ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್ ನ್ನು ದಾಖಲಿಸಲು ಕ್ರಮ ಕೈಗೊಳ್ಳಲಾಗಿದೆ. ಈ ಹಿನ್ನೆಲೆಯಲ್ಲಿ ಕೆಳಕಂಡ ಮಾಹಿತಿಯನ್ನು ಸಾರ್ವಜನಿಕರ/ಉದ್ಯೋಗಾಕಾಂಕ್ಷಿಗಳ ಗಮನಕ್ಕೆ ತರಲಾಗಿದೆ.

ಉದ್ಯೋಗ ಪ್ರಕಟಣೆ ಸಂಖ್ಯೆ: ಕವಿಪ್ರನಿನಿ/ಬಿ16/86393/2018-19 ದಿನಾಂಕ 25.02.2019 ರಲ್ಲಿನ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿದ್ಯುತ್), ಸಹಾಯಕ ಇಂಜಿನಿಯರ್ (ವಿದ್ಯುತ್/ಸಿವಿಲ್), ಕಿರಿಯ ಇಂಜಿನಿಯರ್ (ವಿದ್ಯುತ್/ಸಿವಿಲ್), ಕಿರಿಯ ಆಪ್ತ ಸಹಾಯಕ ಮತ್ತು ಕಿರಿಯ ಸಹಾಯಕ ಪದವೃಂದದ ಒಟ್ಟು 1653 ಹುದ್ದೆಗಳ ನೇಮಕಾತಿಯ ಪ್ರಕ್ರಿಯೆಯನ್ನು ಆಡಳಿತಾತ್ಮಕ ಕಾರಣಗಳಿಂದಾಗಿ ನಿಗಮದ ದಿನಾಂಕ 06.01.2020, 06.05.2020 ಹಾಗೂ 21.11.2020 ರ ಅಧಿಸೂಚನೆಗಳಲ್ಲಿ ರದ್ದುಗೊಳಿಸಲಾಗಿರುತ್ತದೆ.

ಪ್ರಸ್ತುತ, ಕವಿಪ್ರನಿನಿ ಮತ್ತು ಎಸ್ಕಾಂಗಳಲ್ಲಿ ಕಿರಿಯ ಪವರ್‌ಮ್ಯಾನ್ ಮತ್ತು ಕಿರಿಯ ಸ್ಟೇಷನ್ ಪರಿಚಾರಕ ಹುದ್ದೆಗಳಿಗೆ ಮಾತ್ರ ನೇಮಕಾತಿಯ ಪ್ರಕ್ರಿಯೆಯು ಪೂರ್ಣಗೊಂಡಿದ್ದು, ಸದ್ಯದಲ್ಲೇ ನೇಮಕಾತಿ ಆದೇಶ ನೀಡಲು ಕ್ರಮವಹಿಸಲಾಗುತ್ತದೆ.

ಆದುದರಿಂದ ನೇಮಕಾತಿಗೆ ಸಂಬಂಧಿಸಿದಂತೆ, ಕವಿಪ್ರನಿನಿ ಮತ್ತು ಎಸ್ಕಾಂಗಳ ಅಧಿಕೃತ ವೆಬ್‌ಸೈಟ್‌ಗಳು ಹಾಗೂ ಅಧಿಕೃತ ದಿನ ಪತ್ರಿಕೆಗಳಲ್ಲಿ ಪ್ರಕಟಿಸಲಾಗುವ ಮಾಹಿತಿಯನ್ನು ಮಾತ್ರವೇ ಅಭ್ಯರ್ಥಿಗಳು ಪಾಲಿಸತಕ್ಕದ್ದು. ಈ ವಿಷಯವಾಗಿ ಯಾವುದೇ ಅಭ್ಯರ್ಥಿಗಳು ಯಾವುದೇ ವ್ಯಕ್ತಿ ಅಥವಾ ಮಧ್ಯವರ್ತಿಗಳನ್ನು ಸಂಪರ್ಕಿಸುವುದಾಗಲೀ ಅಥವಾ ಅವರ ಯಾವುದೇ ಆಶ್ವಾಸನೆ, ಆಮಿಷಗಳಿಗೆ ಒಳಗಾಗುವುದಾಗಲೀ ಮಾಡಬಾರದು ಹಾಗೂ ಯಾವುದೇ ವದಂತಿಗಳಿಗೆ ಕಿವಿಗೊಡಬಾರದು ಎಂದು ವಿನಂತಿಸಲಾಗಿದೆ.

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)
ಕವಿಪ್ರನಿನಿ.